ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 292 ಎಂಎನ್‌ವೈ 2022(ಇ) ಬೆಂಗಳೂರು ದಿನಾಂಕ: 07-06-2022ರ "ಮುಖ್ಯ ಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆ ಅಡಿಯಲ್ಲಿ ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೈಗೊಳ್ಳಲು ಉದ್ದೇಶಿಸಿರುವ "Comprehensive Development of Roads & Drains in JP Park, Yeshawanthapura, Jalahalli and Surrounding areas in W No.16, 17 and 37 under PACKAGE- 2022-23 RRN-DIV-(15)" Indent No: 52457, ಕ್ರಮ ಸಂಖ್ಯೆ.45, 46 ಮತ್ತು 47 ರ ಪ್ಯಾಕೇಜಿನ ರೂ.11.00 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021(ಇ), ದಿನಾಂಕ: 14-01-2022.
2. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021(ಇ), ದಿನಾಂಕ: 25-02-2022 (21).
3. ಸರ್ಕಾರದ ಆದೇಶ ಸಂಖ್ಯೆ: ನಅಇ 292 ಎಂಎನ್‌ವೈ 2022(ಇ), ದಿನಾಂಕ: 07-06-2022.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ:ಬಿಬಿಎಂಪಿ./ಮು.ಆ/ಪಿ.ಆರ್/104/2022-23, ದಿನಾಂಕ: 17-08-2022.
5. ದಿನಾಂಕ: 23-08-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 14-01-2022ರ ಆದೇಶದಲ್ಲಿ, ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಸಂದರ್ಭದಲ್ಲಿ ಘೋಷಿಸಿದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ರೂ.6000.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸರ್ಕಾರದ ತಾತ್ವಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 25-02-2022 (21) ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021, ದಿನಾಂಕ: 14-01-2022 ರಂತೆ ಅನುಮೋದಿಸಲಾಗಿರುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸಂಬಂಧಿಸಿದಂತೆ ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರಕ್ಕೆ ರೂ.208.00 ಕೋಟಿಗಳ ಅನುದಾನ ನಿಗಧಿಪಡಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 07-06-2022ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ:25-02-2022 (21) ರಂತೆ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರಕ್ಕೆ ನಿಗಧಿಪಡಿಸಿದ್ದ ರೂ.208.00 ಕೋಟಿಗಳ ಅಂದಾಜು ಮೊತ್ತದ ಕಾಮಗಾರಿಗಳ ಕ್ರಿಯಾಯೋಜನೆ ಪಟ್ಟಿಗೆ ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿದೆ.

..2/-

Scanned with CamScanner

ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ದಿನಾಂಕ: 17-08-2022ರ ಪತ್ರದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರಕ್ಕೆ ಮಾನ್ಯ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆ ಅಡಿಯಲ್ಲಿ ಮಂಜೂರಾಗಿರುವ ರೂ.208.00 ಕೋಟಿ ಅನುದಾನದಲ್ಲಿ ಕೈಗೊಳ್ಳುವ ಕಾಮಗಾರಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 292 ಎಂಎನ್‌ವೈ 2022(ಇ) ಬೆಂಗಳೂರು ದಿನಾಂಕ: 07.06.2022 ರಲ್ಲಿ 55 ಕಾಮಗಾರಿಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿರುತ್ತದೆ. ಸದರಿ ಕಾಮಗಾರಿಗಳನ್ನು ಪ್ಯಾಕೇಜ್ ಕಾಮಗಾರಿಗಳನ್ನಾಗಿ ವಿಂಗಡಿಸಲಾಗಿರುತ್ತದೆ. ಯೋಜನೆಗಳನ್ನು ಅನುಷ್ಠಾನಗೊಳಿಸಲು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಿದ್ದು, ಟೆಂಡರ್‌ಗಳ ತಾಂತ್ರಿಕ ಮತ್ತು ಆರ್ಥಿಕ ಮೌಲ್ಯಮಾಪನ ಹಾಗೂ ದರಸಂಧಾನವನ್ನು ನಡೆಸಲಾಗಿರುತ್ತದೆ. ವಿವರಗಳು ಈ ಕೆಳಕಂಡಂತಿರುತ್ತವೆ ಎಂದು ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರು ಕೋರಿರುತ್ತಾರೆ.

"Comprehensive Development of Roads & Drains in JP Park, Yeshawanthapura, Jalahalli and Surrounding areas in W No.16, 17 and 37 under PACKAGE- 2022-23 RRN-DIV-(15)." ಯೋಜನೆಯಡಿ ಈ ಕೆಳಕಂಡ ಕಾಮಗಾರಿಗಳು ಒಳಗೊಂಡಿರುತ್ತವೆ ಎಂದು ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರು ತಿಳಿಸಿರುತ್ತಾರೆ:

Sl No	GO No	NAME OF WORK	Amount in Lakhs
1	45	Improvements of Drains & Culverts in JP Park and surrounding areas in Ward no 17, JP Park	500.00
2	46	Improvements of Drains & Culverts in Yeshawanthapura and surrounding areas in Ward no 37, Yashawanthapura.	300.00
3	47	Improvements of Drains & Culverts in Jalahalli and surrounding areas in Ward no16, Jalahalli.	300.00
		Total	**1100.00**

ಮೇಲ್ಕಂಡ ಯೋಜನೆಯನ್ನು ಅನುಷ್ಠಾನಗೊಳಿಸಲು ಟೆಂಡರ್ ಪ್ರಕಟಣೆ ಸಂಖ್ಯೆ RRND/EE/Tend/ 04/2022-23, ದಿನಾಂಕ: 07.07.2022 ರನ್ವಯ ಅಂದಾಜು ಮೊತ್ತ ರೂ.1200.00 ಲಕ್ಷಗಳಿಗೆ ಟೆಂಡರ್ ಆಹ್ವಾನಿಸಲಾಗಿದ್ದು, ವಿಜಯವಾಣಿ ಮತ್ತು ಟೈಮ್ಸ್ ಆಫ್ ಇಂಡಿಯಾ ದಿನಪತ್ರಿಕೆಗಳಲ್ಲಿ ದಿನಾಂಕ: 08.07.2022 ರಂದು ಪ್ರಕಟಣೆ ನೀಡಲಾಗಿರುತ್ತದೆ. ಟೆಂಡರ್ ಸಲ್ಲಿಸಲು ಅಂತಿಮ ದಿನಾಂಕ: 30.07.2022 ಆಗಿರುತ್ತದೆ.

ರಾಜರಾಜೇಶ್ವರಿನಗರ ವಿಭಾಗದ ಮೇಲ್ಕಂಡ ಪ್ಯಾಕೇಜ್ ಕಾಮಗಾರಿಗೆ ಮಾನ್ಯ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ"ಯಡಿ ಸರ್ಕಾರದ ಆದೇಶ ಸಂಖ್ಯೆ: ನಅಇ 292 ಎಂಎನ್‌ವೈ 2022(ಇ) ಬೆಂಗಳೂರು ದಿನಾಂಕ:07-06-2022 ರಲ್ಲಿ ಒಟ್ಟು ರೂ.1100.00 ಲಕ್ಷಗಳ ಅನುದಾನ ಲಭ್ಯವಿರುತ್ತದೆ ಹಾಗೂ ಟೆಂಡರ್ ಪ್ರಕಟಣೆ ವಿವರವೂ ಮೇಲ್ಕಂಡ ಕೋಷ್ಟಕದಲ್ಲಿ ವಿವರಿಸಿದ್ದು, ದ್ವಿ-ಲಕೋಟೆ ತಾಂತ್ರಿಕ ಟೆಂಡರ್‌ನಲ್ಲಿ ಗುತ್ತಿಗೆದಾರರು ಸಲ್ಲಿಸಿರುವ ದಾಖಲೆಗಳನ್ವಯ ದಿನಾಂಕ:06-08-2022 ರಂದು ಮಾನ್ಯ ಮುಖ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ತಾಂತ್ರಿಕ ಮೌಲ್ಯಮಾಪನ ಸಮಿತಿ ಸಭೆಯ ವಿಷಯ ಸಂಖ್ಯೆ: 14 ರ ತೀರ್ಮಾನದಂತೆ ತಾಂತ್ರಿಕ ಬಿಡ್‌ಗೆ ಅನುಮೋದನೆ ದೊರೆತಿದ್ದು, ದಿನಾಂಕ:06-08-2022 ರಂದು ತಾಂತ್ರಿಕ ಬಿಡ್‌ನಲ್ಲಿ ಅರ್ಹರಾಗಿರುವ ಇಬ್ಬರು ಗುತ್ತಿಗೆದಾರರ ಆರ್ಥಿಕ ಬಿಡ್‌ನ್ನು ತೆರೆಯಲಾಗಿದ್ದು, ವಿವರ ಕೆಳಕಂಡಂತಿರುತ್ತದೆ ಎಂದು ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರು ತಿಳಿಸಿರುತ್ತಾರೆ:

..3/-

Scanned with CamScanner

ಕ್ರ ಸಂ	ಗುತ್ತಿಗೆದಾರರ ಹೆಸರು	ಟೆಂಡರ್ ಗಿಟ್ಟಿ ಮೊತ್ತ 2021–22 ನೇ ಸಾಲಿನ ಅನುಮೋದಿತ ದರಗಳಂತೆ (ರೂ.ಗಳಲ್ಲಿ)	ಟೆಂಡರ್ ಗಿಟ್ಟಿ ಮೊತ್ತ ದಿ: 07.07.2022 ರ issue rates ಗಳಂತೆ (ರೂ.ಗಳಲ್ಲಿ)	ಗುತ್ತಿಗೆದಾರರು ನಮೂದಿಸಿರುವ ಮೊತ್ತ ರೂಗಳಲ್ಲಿ (ರೂ.ಗಳಲ್ಲಿ)	2021–22ನೇ ಸಾಲಿನ ಅನುಮೋದಿತ ದರಗಳಿಗೆ ಹೋಲಿಸಿದಾಗ ಶೇಕಡವಾರು	ದಿನಾಂಕ: 07.07.2022 ರ issue rates ಗಳಿಗೆ ಹೋಲಿಸಿದಾಗ ಶೇಕಡವಾರು	ಷರಾ
01	Sri Panduranga E	9,13,50,496.73	9,10,00,148.80	9,70,12,582.56	+6.20%	+6.61%	L1
02	Sri Javali Chandranna Prakash (J C PRAKASH INFRASTRUCTURES PRIVATE LIMITED)			10,00,24,272.12	+9.50%	+9.92%	L2

ಎಲ್–1 ಬಿಡ್‌ದಾರರಾದ Sri Panduranga E ರವರು ನಮೂದಿಸಿರುವ ಮೊತ್ತ ರೂ.9,70,12,582.56 (ಜಿ.ಎಸ್.ಟಿ ತೆರಿಗೆ ಹೊರತುಪಡಿಸಿ) ಗಳನ್ನು ಮಂಜೂರಾದ ದರಗಳಿಗೆ ಹೋಲಿಸಿದಾಗ ಶೇ.+6.20% ರಷ್ಟು ಹೆಚ್ಚು ಮತ್ತು ಪ್ರಸಕ್ತ ಚಾಲ್ತಿ ದರಪಟ್ಟಿ 2021–22ನೇ ಸಾಲಿನ ಕರ್ನಾಟಕ ಲೋಕೋಪಯೋಗಿ ಇಲಾಖೆ, ಬೆಂಗಳೂರು ವೃತ್ತದ ದಿನಾಂಕ:07–07–2022 ರ ಪರಿಷ್ಕೃತ (Issue Rates) ದರಗಳಿಗೆ ಹೋಲಿಸಿದಾಗ ಶೇ.+6.61% ರಷ್ಟು ಹೆಚ್ಚಿನ ದರವಾಗಿದ್ದ ಹಿನ್ನೆಲೆಯಲ್ಲಿ ಎಲ್–1 ಬಿಡ್‌ದಾರರಾದ Sri Panduranga E ರವರೊಂದಿಗೆ ದರಸಂಧಾನ ಕೈಗೊಂಡು ಟೆಂಡರ್‌ನಲ್ಲಿ ನಮೂದಿಸಿರುವ ದರಗಳನ್ನು ಕಡಿಮೆ ಮಾಡಲು ಸೂಚಿಸಿದ್ದರ ಮೇರೆಗೆ ಬಿಡ್ದುದಾರರು ಹಾಲಿ ನಮೂದಿಸಿರುವ ರೂ.9,70,12,582.56 (ಜಿ.ಎಸ್.ಟಿ ತೆರಿಗೆ ಹೊರತುಪಡಿಸಿ) ಗಳ ಬದಲಾಗಿ ರೂ.9,50,91,478/– (ಜಿ.ಎಸ್.ಟಿ ತೆರಿಗೆ ಹೊರತುಪಡಿಸಿ) ಗಳಿಗೆ ಸಂಧಾನಿತ ದರ ಸಲ್ಲಿಸಿರುತ್ತಾರೆ. ಸದರಿ ಸಂಧಾನಿತ ದರ ಮೊತ್ತ ರೂ.9,50,91,478/– (ಜಿ.ಎಸ್.ಟಿ ತೆರಿಗೆ ಹೊರತುಪಡಿಸಿ)ಗಳನ್ನು ಮಂಜೂರಾದ ದರಗಳಿಗೆ ಹೋಲಿಸಿದಾಗ ಶೇ.+4.10% ರಷ್ಟು ಹೆಚ್ಚುವರಿ ಮತ್ತು ದಿನಾಂಕ:07.07.2022 ರ ಪರಿಷ್ಕೃತ (Issue Rates) ದರಗಳಿಗೆ ಹೋಲಿಸಿದಾಗ ಶೇ.+4.50% ರಷ್ಟು ಹೆಚ್ಚುವರಿ ದರವಾಗಿದ್ದು, ಸಂಧಾನಿತ ಟೆಂಡರ್ ಬಗ್ಗೆ ತೀರ್ಮಾನ ಕೈಗೊಳ್ಳಲು ಸರ್ಕಾರದ ಮಟ್ಟದಲ್ಲಿ ರಚಿತವಾಗಿರುವ ಅಧಿಕಾರಯುಕ್ತ ಸಮಿತಿಯ ಮುಂದೆ ಮಂಡಿಸುವುದು ಸೂಕ್ತವೆಂದು ಸರ್ವಾನುಮತದಿಂದ ತೀರ್ಮಾನಿಸಲಾಯಿತು ಎಂದು ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರು ತಿಳಿಸಿರುತ್ತಾರೆ:

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ದಿನಾಂಕ: 23.08.2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿಬಿಎಂಪಿ ಮುಖ್ಯ ಆಯುಕ್ತರ ದಿನಾಂಕ: 17.08.2022 ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಸದರಿ ಸಭೆಯಲ್ಲಿ ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿರುತ್ತದೆ.

..4/–

Scanned with CamScanner

"ವಿವರವಾದ ಚರ್ಚೆಯ ನಂತರ, "Comprehensive Development of Roads & Drains in JP Park, Yeshawanthapura, Jalahalli and Surrounding areas in W No.16, 17 and 37 under PACKAGE- 2022-23 RRN-DIV-(15)." ಯೋಜನೆಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, Sri.Panduranga.E ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.9,13,50,496.73 ಗಳಿಗೆ ಹೋಲಿಸಿದಾಗ ಶೇಕಡ 4.10% ರಷ್ಟು ಹೆಚ್ಚು ಮತ್ತು ದಿನಾಂಕ:07.07.2022 ರಿಂದ ಜಾರಿಯಲ್ಲಿರುವ 2021-22ನೇ ಸಾಲಿನ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡ +4.50% ರಷ್ಟು ಹೆಚ್ಚು ಇರುವ ಅಂದರೆ, ರೂ.9,50,91,478.00ಗಳ ಸಂಧಾನಿತ ಮೊತ್ತಕ್ಕೆ ಅನುಮೋದಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು."

ದಿನಾಂಕ: 23-08-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ

ಸರ್ಕಾರಿ ಆದೇಶ ಸಂಖ್ಯೆ: ನಅಇ 550 ಎಂಎನ್‌ವೈ 2022(ಇ),
ಬೆಂಗಳೂರು, ದಿನಾಂಕ: 14-09-2022.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 292 ಎಂಎನ್‌ವೈ 2022(ಇ), ದಿನಾಂಕ:07-06-2022ರಲ್ಲಿ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರಕ್ಕೆ ರೂ.208.00 ಕೋಟಿಗಳ ಅಂದಾಜು ಮೊತ್ತದ ಕಾಮಗಾರಿಗಳ ಕ್ರಿಯಾಯೋಜನೆ ಪಟ್ಟಿಗೆ ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದ್ದು, ಸದರಿ ಆದೇಶದ (ಕ್ರಮ ಸಂಖ್ಯೆ: 45,46 ಮತ್ತು 47)ರ ಮೂರು ಕಾಮಗಾರಿಗಳನ್ನು ಒಟ್ಟುಗೂಡಿಸಿ ಮಾಡಲಾಗಿರುವ "Comprehensive Development of Roads & Drains in JP Park, Yeshawanthapura, Jalahalli and Surrounding areas in W No.16, 17 and 37 under PACKAGE- 2022-23 RRN-DIV-(15)." (Indent No: 52457) ಯೋಜನೆಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, Sri.Panduranga.E ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.9,13,50,496.73 ಗಳಿಗೆ ಹೋಲಿಸಿದಾಗ ಶೇಕಡ 4.10% ರಷ್ಟು ಹೆಚ್ಚು ಮತ್ತು ದಿನಾಂಕ:07.07.2022 ರಿಂದ ಜಾರಿಯಲ್ಲಿರುವ 2021-22ನೇ ಸಾಲಿನ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡ +4.50% ರಷ್ಟು ಹೆಚ್ಚು ಇರುವ ಅಂದರೆ, ರೂ.9,50,91,478.00 (ಒಂಭತ್ತು ಕೋಟಿ ಐವತ್ತು ಲಕ್ಷದ ತೊಂಭತ್ತೊಂದು ಸಾವಿರದ ನಾಲ್ಕುನೂರ ಎಪ್ಪತ್ತೆಂಟು ರೂಪಾಯಿಗಳು ಮಾತ್ರ) ಗಳ ಸಂಧಾನಿತ ಮೊತ್ತಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.

2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿರುವುದನ್ನು ಬಿಬಿಎಂಪಿ ಮುಖ್ಯ ಆಯುಕ್ತರು ಖಚಿತಪಡಿಸಿಕೊಂಡು ಅನುಷ್ಠಾನಗೊಳಿಸುವುದು.

..5/-

Scanned with CamScanner

3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021(ಇ), ದಿನಾಂಕ: 25-02-2022(21) ರಲ್ಲಿ ಹಾಗೂ ಸರ್ಕಾರದ ಆದೇಶ ಸಂಖ್ಯೆ: ನಅಇ 292 ಎಂಎನ್‌ವೈ 2022 (ಇ) ದಿನಾಂಕ: 07-06-2022 ರಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳುಸಾರ ಕ್ರಮವಹಿಸತಕ್ಕದ್ದು.
6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು, ಅನುಮೋದನೆ ಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ದಿನಾಂಕ: 23-08-2022ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಮುಖ್ಯ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್.ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner